**9 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ,**
**ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು.**

**ಎಸ್.ಸಿ.ನಂ.120/2019**

**(ಚಾ.ಸಾ.9/ಪ್ರಾ.ಸಾ.8)**

ತಾಃ 30.06.2025 ರಂದು ಸಾಕ್ಷಿಗೆ ಪ್ರಮಾಣ ವಚನ ಮಾಡಿಸಲಾಯಿತು.

| | |
|---|---|
| ಸಾಕ್ಷಿದಾರರ ಹೆಸರು: | ಲಕ್ಷ್ಮೀನಾರಾಯಣ |
| ತಂದೆಯ ಹೆಸರು | ಲೇಟ್ ದೊಡ್ಡಮುನಿಯಪ್ಪ |
| ವಯಸ್ಸು | 52 ವರ್ಷ |
| ಉದ್ಯೋಗ | ಆರಕ್ಷಕ ನಿರೀಕ್ಷಕರು, ಸಿಇಎನ್ ಪಿಎಸ್, |
| ವಾಸ ಸ್ಥಳ | ಕೆಜಿಎಫ್, ಕೋಲಾರ ಜಿಲ್ಲೆ |

**ಮುಖ್ಯ ವಿಚಾರಣೆಃ ಸರ್ಕಾರಿ ಅಭಿಯೋಜಕರಿಂದಃ**

ನಾನು ದಿಃ14.08.2018 ರಿಂದ ದಿಃ24.06.2020 ರವರೆಗೆ ನಂದಗುಡಿ ಪೊಲೀಸ್ ಠಾಣೆಯಲ್ಲಿ ಆರಕ್ಷಕ ಉಪ ನಿರೀಕ್ಷಕರಾಗಿ ಕರ್ತವ್ಯ ನಿರ್ವಹಿಸಿದ್ದೇನೆ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ದಿಃ13.10.2018 ರಂದು ಪಿರ್ಯಾದಿಯು ಠಾಣೆಗೆ ಹಾಜರಾಗಿ ನೀಡಿದ ಹೇಳಿಕೆಯ ದೂರನ್ನು ಪಡೆದುಕೊಂಡು ನಮ್ಮ ಠಾಣಾ ಮೊಕದ್ದಮೆ ಸಂಖ್ಯೆ 217/2018 ರಂತೆ ಪ್ರಕರಣ ದಾಖಲಿಸಿ ಪ್ರ.ವ.ವ ಅನ್ನು ನ್ಯಾಯಾಲಯಕ್ಕೆ ನಿವೇಧಿಸಿಕೊಂಡಿರುತ್ತೇನೆ. ದೂರಿನಲ್ಲಿ ಇರುವ ಸಾಕ್ಷಿಯ ಸಹಿಯನ್ನು ನಿ.ಪಿ.1(ಬಿ) ಎಂದು ಗುರುತಿಸಲಾಯಿತು. ಪ್ರ.ವ.ವ ಅನ್ನು ನಿ.ಪಿ.9 ಎಂದು, ಸಾಕ್ಷಿಯ ಸಹಿಯನ್ನು ನಿ.ಪಿ.9(ಎ) ಎಂದು

ಗುರುತಿಸಲಾಯಿತು. ದಿಃ14.10.2018 ರಂದು ನಾನು ಮತ್ತು ನಮ್ಮ ಸಿಬ್ಬಂಧಿಗಳು ಕೃತ್ಯ ನಡೆದ ಸ್ಥಳಕ್ಕೆ ಭೇಟಿ ನೀಡಿ 1 ರಿಂದ 3 ಮತ್ತು 7 ನೇ ಆರೋಪಿತರನ್ನು ವಶಕ್ಕೆ ಪಡೆದು ಠಾಣೆಗೆ ಬೆಳಿಗ್ಗೆ 7.00 ಗಂಟೆಗೆ ಬಂದು ದಸ್ತಗಿರಿ ಕ್ರಮ ಜರುಗಿಸಿ ನ್ಯಾಯಾಲಯಕ್ಕೆ ಹಾಜರುಪಡಿಸಿರುತ್ತೇನೆ. ಅದೇ ದಿನ ಕೃತ್ಯ ನಡೆದ ಸ್ಥಳಕ್ಕೆ ಭೇಟಿ ನೀಡಿ ಚಾಸಾ.6 ಮತ್ತು 7 ಪಂಚರ ಸಮಕ್ಷಮ ಚಾಸಾ.1 ರವರು ತೋರಿಸಿದ ಸ್ಥಳದಲ್ಲಿ ನಿ.ಪಿ.2 ರಂತೆ ಬೆಳಿಗ್ಗೆ 10.00 ರಿಂದ 10.45 ರವರೆಗೆ ಪಂಚನಾಮೆ ಮಾಡಿ ಪಿರ್ಯಾದಿ ಹಾಜರುಪಡಿಸಿದ ಕೃತ್ಯಕ್ಕೆ ಉಪಯೋಗಿಸಿದ ಒಂದು ದೊಣ್ಣೆ ಮತ್ತು ಕಬ್ಬಿಣದ ರಾಡ್ ಅನ್ನು ಜಪ್ತಿಪಡಿಸಿ ಪಂಚರ ಸಹಿಗಳನ್ನು ಪಡೆದಿರುತ್ತೇನೆ. ಸಾಕ್ಷಿಯ ಸಹಿಯನ್ನು ನಿ.ಪಿ.2(ಡಿ) ಎಂದು ಗುರುತಿಸಲಾಯಿತು. ಜಪ್ತಿಪಡಿಸಿದ ಮಾಲುಗಳನ್ನು ಮಾಲುಪಟ್ಟಿ ಸಂಖ್ಯೆ 163/2018 ರಲ್ಲಿ ಅಳವಡಿಸಿರುತ್ತೇನೆ. ಸದರಿ ದಾಖಲೆಯನ್ನು ನಿ.ಪಿ.10 ಎಂದು, ಸಾಕ್ಷಿಯ ಸಹಿಯನ್ನು ನಿ.ಪಿ.10(ಎ) ಎಂದು ಗುರುತಿಸಲಾಯಿತು. ಅದೇ ದಿನ ಸ್ಥಳದಲ್ಲಿ ಚಾಸಾ.2 ರಿಂದ 5 ರವರ ಹೇಳಿಕೆಗಳನ್ನು ಪಡೆದುಕೊಂಡಿರುತ್ತೇನೆ. ಅದೇ ದಿನ ಕೃತ್ಯ ನಡೆದ ಸ್ಥಳದ ಜಮೀನಿನ ಆರ್ ಟಿ ಸಿ ಅನ್ನು ನಂದಗುಡಿ ನಾಡಕಛೇರಿಯಿಂದ ಪಡೆದು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ಸದರಿ ದಾಖಲೆಯನ್ನು ನಿ.ಪಿ.11 ಎಂದು ಗುರುತಿಸಲಾಯಿತು.

2. ದಿಃ26.10.2018 ರಂದು ಚಾಸಾ.1 ಮತ್ತು 2 ರವರ ಗಾಯದ ಪ್ರಮಾಣ ಪತ್ರಗಳನ್ನು ನಿ.ಪಿ.7 ಮತ್ತು 8 ರಂತೆ ಆಸ್ಪತ್ರೆಯಿಂದ ಪಡೆದುಕೊಂಡಿರುತ್ತೇನೆ. ಸಾಕ್ಷಿಯ ಸಹಿಗಳನ್ನು ನಿ.ಪಿ.7(ಬಿ) ಮತ್ತು ನಿ.ಪಿ.8(ಬಿ) ಎಂದು ಗುರುತಿಸಲಾಯಿತು. ದಿಃ25.11.2018 ರಂದು 4 ರಿಂದ 6 ನೇ ಆರೋಪಿತರು ನಿರೀಕ್ಷಣಾ ಜಾಮೀನು ಪಡೆದು

ನನ್ನ ಮುಂದೆ ಹಾಜರಾದ ಮೇರೆಗೆ ದಸ್ತಗಿರಿ ಕ್ರಮ ಜರುಗಿಸಿ ಜಾಮೀನಿನ ಮೇಲೆ ಬಿಡುಗಡೆ ಮಾಡಿರುತ್ತೇನೆ. ದಿಃ03.12.2018 ರಂದು ತನಿಖೆಯನ್ನು ಪೂರೈಸಿ ಆರೋಪಿ ಸಾಭೀತಾದ್ದರಿಂದ ಅಂತಿಮ ವರದಿ ಸಲ್ಲಿಸಿರುತ್ತೇನೆ. ನಾನು ದಸ್ತಗಿರಿ ಮಾಡಿದ ಆರೋಪಿಗಳ ಪೈಕಿ 1 ಮತ್ತು 2ನೇ ಆರೋಪಿಗಳು ನ್ಯಾಯಾಲಯದ ಮುಂದೆ ಇದ್ದು ಉಳಿದ ಆರೋಪಿಗಳು ವಿನಾಯತಿ ಅರ್ಜಿ ಸಲ್ಲಿಸಿರುತ್ತಾರೆ. ಆ ದಿನ ಜಪ್ತಿಪಡಿಸಿದ ಒಂದು ದೊಣ್ಣೆ ಮತ್ತು ಕಬ್ಬಿಣದ ರಾಡ್ ಅನ್ನು ಸಾಕ್ಷಿಯು ಗುರುತಿಸಿದ್ದು ಅವುಗಳನ್ನು ಈಗಾಗಲೇ ಮು.ಮಾ.1 ಮತ್ತು 2 ಎಂದು ಗುರುತಿಸಲಾಗಿದೆ.

**<u>ಪಾಟೀ ಸವಾಲುಃ ಆರೋಪಿ ಪರ ಶ್ರೀ. ಎಮ್ ಜಿ ಕೆ ವಕೀಲರಿಂದಃ</u>**

3. ಸಮಯ ಕೋರಿದ್ದಾರೆ. ಯಾವುದೇ ಸಕಾರಣಗಳು ಇಲ್ಲದ ಕಾರಣ ಪಾಟೀ ಸವಾಲು ಇಲ್ಲ ಎಂದು ಪರಿಗಣಿಸಿದೆ.

(ಮೇಲ್ಕಂಡ ಸಾಕ್ಷ್ಯವನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಿದೆ.)

ಓ. ಹೇ. ಕೇ. ಸ. ಸಹಿ ಮಾಡಿದ್ದಾರೆ.

(ವಿಜಯ್ ಕುಮಾರ್)
9ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು.